ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

**ಕರ್ನಾಟಕ ವಿಧಾನ ಪರಿಷತ್ತು**

ನೂರ ನಲವತ್ತೊಂದನೆಯ ಅಧಿವೇಶನ

ಮಂಗಳವಾರ, ದಿನಾಂಕ: 29ನೇ ಸೆಪ್ಟಂಬರ್, 2020

ಮಂಡ್ಯ ಜಿಲ್ಲೆಯ ಮದ್ದೂರು ತಾಲ್ಲೂಕಿನ ಮಾದಾರಹಳ್ಳಿಯ ಕೃಷಿ ಪತ್ತಿನ ಸಹಕಾರ ಸಂಘದ ಬಗ್ಗೆ

ಶ್ರೀ ಎನ್. ಅಪ್ಪಾಜಿಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-

903 (1105) ಮಾನ್ಯ ಸಹಕಾರ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಮಂಡ್ಯ ಜಿಲ್ಲೆ, ಮದ್ದೂರು ತಾಲ್ಲೂಕಿನ ಭಾರತಿ ನಗರ ವೃತ್ತಕ್ಕೆ ಮೇಲ್ವಿಚಾರಕರನ್ನಾಗಿ ಫೆಬ್ರುವರಿ 2020 ರಿಂದ ಇಲ್ಲಿಯವರೆಗೆ ಎಷ್ಟು ಜನ ಅಧಿಕಾರಿಗಳನ್ನು ವರ್ಗಾವಣೆ ಮಾಡಲಾಗಿದೆ; ಇದಕ್ಕೆ ಕಾರಣಗಳೇನು; (ಮಾಹಿತಿ ನೀಡುವುದು)

(ಆ) ಭಾರತಿ ನಗರ ವೃತ್ತದ ವ್ಯಾಪ್ತಿಗೆ ಬರುವ ಮಾದಾರಹಳ್ಳಿ ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘದಲ್ಲಿ ನಡೆದ ಸುಮಾರು 10 ಆಡಳಿತ ಮಂಡಳಿ ಸಭೆಗಳಿಗೆ ಯಾರು ಯಾರು ವೃತ್ತ ಮೇಲ್ವಿಚಾರಕರು ಎಷ್ಟು ಸಭೆಗೆ ಗೈರು ಹಾಜರಾಗಿದ್ದಾರೆ; ಇವರು ಗೈರು ಹಾಜರಾಗಲು ಕಾರಣಗಳೇನು ;

(ಇ) ಈ ರೀತಿ ವೃತ್ತ ಮೇಲ್ವಿಚಾರಕರು ಗೈರು ಹಾಜರಾದ ಹಿನ್ನಲೆಯಲ್ಲಿ ಮಾದಾರಹಳ್ಳಿ ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘದಲ್ಲಿರುವ 257 ಜನ ರೈತರಿಗೆ ಸುಮಾರು ರೂ. 125 ಲಕ್ಷಗಳ ಸಾಲವನ್ನು ನಿಗದಿತ ಅವಧಿಯಲ್ಲಿ ವಿತರಿಸದೆ ತೊಂದರೆ ನೀಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಈ) ಗೈರು ಹಾಜರಾದ ವೃತ್ತ ಮೇಲ್ವಿಚಾರಕರ ಮೇಲೆ ಶಿಸ್ತು ಕ್ರಮ ಕೈಗೊಳ್ಳಲು ರಾಜ್ಯ ಸರ್ಕಾರ ಚುನಾವಣೆ ಆಯುಕ್ತರು ಮತ್ತು ಮಂಡ್ಯ ಜಿಲ್ಲಾಧಿಕಾರಿಗಳು ಬ್ಯಾಂಕಿನ ಸಿ.ಇ.ಓ. ರವರಿಗೆ ಆದೇಶ ನೀಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಉ) ಈ ಸಂಬಂಧ ಬ್ಯಾಂಕಿನ ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳು ಸಂಬಂಧಪಟ್ಟ ಅಧಿಕಾರಿಗಳ ಮೇಲೆ ಏನು ಕ್ರಮ ಕೈಗೊಂಡಿದ್ದಾರೆ; ಇಲ್ಲದಿದ್ದಲ್ಲಿ ಇದಕ್ಕೆ ಕಾರಣಗಳೇನು;

(ಊ) ರಾಜ್ಯ ಚುನಾವಣಾ ಆಯುಕ್ತರು ಮತ್ತು ಮಂಡ್ಯ ಜಿಲ್ಲಾಧಿಕಾರಿಗಳು ಆದೇಶವನ್ನು ಬ್ಯಾಂಕಿನ ಸಿ.ಇ.ಓ. ರವರು ಪಾಲಿಸದಿದ್ದರೆ ಸರ್ಕಾರ ಇವರ ಮೇಲೆ ಯಾವ ಕ್ರಮ ಕೈಗೊಂಡು ರೈತರಿಗೆ ನ್ಯಾಯ ಒದಗಿಸುತ್ತದೆ ?